ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ತೊಗರಿಗೆ ಬೆಂಬಲ ಬೆಲೆ ನೀಡುವ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು):-

1098 (1154) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತೊಗರಿಬೆಳೆಗೆ ಬೆಂಬಲ ಬೆಲೆ ನೀಡಿ ಖರೀದಿಗೆ ಮಿತಿಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ತೊಗರಿಗೆ ಸರ್ಕಾರ ನಿಗಧಿಪಡಿಸಿದ ಬೆಂಬಲ ಬೆಲೆ ಎಷ್ಟು ;

(ಆ) ಪಹಣಿಯಲ್ಲಿ ನಮೂದಾಗಿರುವ ಬೆಳೆಗೂ ಮಾರಾಟ ಮಾಡಲು ರೈತರು ತಂದಿರುವ ಬೆಳೆಗಳು ಬೇರೆ ಬೇರೆ ಇವೆ ಎನ್ನುವ ಕಾರಣ ನೀಡಿ ತೊಗರಿ ಖರೀದಿಸಲು ನಿರಾಕರಿಸುತ್ತಿರುವುದರಿಂದ ರೈತರು ಮತ್ತೆ ಸಾಲಗಾರರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬರಗಾಲ ಪ್ರದೇಶದ ರೈತರು ಬೆಳೆದ ಯಾವುದೇ ಬೆಳೆಯನ್ನು ಪಹಣಿಯಲ್ಲಿ ಬೆಳೆಯ ಮಾಹಿತಿ ಇರಲಿ, ಇಲ್ಲದಿರಲಿ ಕೂಡಲೇ ಬೆಂಬಲ ಬೆಲೆ ನೀಡಿ ಖರೀದಿಸಲು ಸರ್ಕಾರ ಕೈಗೊಂಡ ಕ್ರಮವೇನು;

(ಈ) ರೈತರು ಬೆಳೆದ ಬೆಳೆಗೆ ಸೂಕ್ತ ಬೆಂಬಲ ಬೆಲೆ ದೊರೆತ್ತಿಲ್ಲವೆಂಬ ಕಾರಣಕ್ಕಾಗಿ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು ; ಬೆಳೆದ ಬೆಳೆಯನ್ನು ಸರ್ಕಾರ ಖರೀದಿಸದೇ ಇರುವುದರಿಂದ ಕೃಷಿಗಾಗಿ ಮಾಡಿದ ಸಾಲವನ್ನು ತೀರಿಸಲಾಗದೆ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು ;

(ಉ) ತೊಗರಿಯನ್ನು ಬೆಂಬಲ ಬೆಲೆ ನೀಡಿ ಖರೀದಿಸುವ ಮಿತಿಯನ್ನು ಹೆಚ್ಚಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?